**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ**

**ಸಿಸಿ ನಂ. 171/2024**

ಚಾಸಾ-4 ಫ್ರಾಸಾ-3

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 17-09-2025

| | | |
|---|---|---|
| ಹೆಸರು | : | ಇಲಿಯಾಜ |
| ಗಂಡನ ಹೆಸರು | : | ಸಾಹೇಬಲಾಲ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ಪ್ಯೂನ ಗ್ರಾಮ ಪಂಚಾಯತಿ |
| ವಾಸಸ್ಥಳ | : | ಅತನೂರು ಗ್ರಾಮ |

-: **ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-**

ಚಾಸಾ 1, 5, 6 ರವರು ಪರಿಚಯ ಇರುತ್ತಾರೆ.

ಈ ಪ್ರಕರಣದಲಿ ಏನು ಆಗಿದೆ ಎಂದು ನನಗೆ ಗೊತ್ತಿಲ್ಲ. ನಾನು ಚಹಾ ತರಲು ಹೋಗಿದ್ದೆ. ನಂತರ ನಾನು ಮರಳಿ ಪಂಚಾಯತಿಗೆ ಬಂದಾಗ ಪೋಲಿಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಸ.ಸ.ಅ. ರವರಿಂದ**

ನಾನು 2017 ರಿಂದ ಅತನೂರು ಗ್ರಾಮ ಪಂಚಾಯತಿಯಲ್ಲಿ ಸಿಪಾಯಿ ಎಂದು ಕರ್ತವ್ಯ ನಿರ್ವಹಿಸುತ್ತಿದ್ದೇನೆ ಎಂದರೆ ಸರಿ. ಚಾಸಾ 1 ರವರು ಪಂಚಾಯತಿ ಅಭಿವೃದ್ದಿ ಅಧಿಕಾರಿ ಇರುತ್ತಾರೆ

ಎಂದರೆ ಸರಿ. 1 ಮತ್ತು 2 ನೇ ಆರೋಪಿತರು ಪಂಚಾಯತಿಯ ಅಧ್ಯಕ್ಷರಾಗಿದ್ದರು ಎಂದರೆ ಸರಿ. 1 ಮತ್ತು 2 ನೇ ಆರೋಪಿತರು ಆಗಾಗ ಪಂಚಾಯತಿಗೆ ಬರುತ್ತಿದ್ದರು ಎಂದರೆ ಸರಿ. ದಿಃ 27-03-2024 ರಂದು ಮದ್ಯಾಹ್ನ 12 ಗಂಟೆಗೆ 3 ಜನ ಆರೋಪಿತರು ಚಾಸಾ 1 ರವರ ಕೋಣೆಯಲ್ಲಿ ಹೋಗಿರುತ್ತಾರೆ ಎಂದರೆ ಸರಿ. ಆರೋಪಿತರು ಚಾಸಾ 1 ರವರಿಗೆ ಬಿಲ್ಲು ಮಾಡಿಕೊಡಿ ಅಂತ ಕೇಳಿ ಜಗಳ ತೆಗೆದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿತರು ಚಾಸಾ 1 ರವರಿಗೆ ಬಿಲ್ಲುಮಾಡಿ ಕೊಡದೇ ಇದ್ದರೇ ನಿನಗೆ ಮತ್ತು ನಿನ್ನ ಕುಟುಂಬಕ್ಕೆ ಜೀವಿಸಲು ಬಿಡುವುದಿಲ್ಲ ಎಂದು ಜನರನ್ನು ಕರೆಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಆಗ ಚಾಸಾ 1 ರವರು ನಾನು ಸುಳ್ಳು ಬಿಲ್ಲುಗಳಿಗೆ ಸಹಿ ಮಾಡುವುದಿಲ್ಲ ಎಂದು ಚೀರಾಡುತ್ತಿರುವಾಗ ನಾನು ಚಾಸಾ 5, 6 ರವರು ಚಾಸಾ 1 ರವರಿಗೆ ಸಮಾಧಾನ ಮಾಡಿರುತ್ತೇವೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿತರು ಚಾಸಾ 1 ರವರಿಗೆ ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ 2 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿ ಪರ ಶ್ರೀ **KGP** ವಕೀಲರಿಂದಃ-

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

ಮರು ವಿಚಾರಣೆಃ - **ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ